ಪುಸ್ತಕ ನೀತಿ

88(172) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಮತ್ತು ಸಣ್ಣ ನೀರಾವರಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕನ್ನಡ ಭಾಷೆಯ ಪುಸ್ತಕಗಳ ಸಾಹಿತಿಗಳಿಗೆ ಹಾಗೂ ಪ್ರಕಾಶಕರಿಗೆ ಪ್ರೋತ್ಸಾಹಿಸಲು "ಪುಸ್ತಕ ನೀತಿ" ರೂಪಿಸಲು ಸರ್ಕಾರ ಉದ್ದೇಶಿಸಿದೆಯೇ;

ಆ) ಹಾಗಿದ್ದಲ್ಲಿ, ಈ ಪುಸ್ತಕ ನೀತಿಯನ್ನು ಯಾವಾಗ ರೂಪಿಸಲಾಗುವುದು.

ಶ್ರೀ ಗೋವಿಂದ ಎಂ. ಕಾರಜೋಳ (ಕನ್ನಡ ಮತ್ತು ಸಂಸ್ಕೃತಿ ಮತ್ತು ಸಣ್ಣ ನೀರಾವರಿ ಹಾಗೂ ಜವಳಿ ಸಚಿವರು)

ಅ) ಹೌದು.

ಆ) ಕರಡು ಪುಸ್ತಕ ನೀತಿಯ ಬಗ್ಗೆ ಸಾರ್ವಜನಿಕರಿಂದ, ಸಂಘ-ಸಂಸ್ಥೆಗಳಿಂದ, ಸಾಹಿತಿಗಳಿಂದ ಆಕ್ಷೇಪಣೆ, ಸಲಹೆ, ಸೂಚನೆ ಪಡೆದು ಅಂತಿಮ ಪುಸ್ತಕ ನೀತಿಯನ್ನು ಪ್ರಕಟಿಸುವ ಬಗ್ಗೆ ಪರಿಶೀಲಿಸಲಾಗುವುದು.

ರಾಷ್ಟ್ರೀಯ ಉದ್ಯಾನ ಹಾಗೂ ವನ್ಯಧಾಮಗಳ ಪ್ರವೇಶ ವಾಹನ ನಿಲುಗಡೆ ಶುಲ್ಕ

89(174) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್) ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ರಾಷ್ಟ್ರೀಯ ಉದ್ಯಾನವನ ಹಾಗೂ ವನ್ಯಧಾಮಗಳು ಯಾವುವು;

ಆ) ಈ ರಾಷ್ಟ್ರೀಯ ಉದ್ಯಾನವನ ಹಾಗೂ ವನ್ಯಧಾಮಗಳ ಪ್ರವೇಶ ಶುಲ್ಕ ಹಾಗೂ ವಾಹನ ನಿಲುಗಡೆ ಶುಲ್ಕವನ್ನು ಹೆಚ್ಚಿಸಲಾಗಿದೆಯೇ (ಹಿಂದಿನ ಹಾಗೂ ಈಗಿನ ದರಗಳ ವಿವರ ನೀಡುವುದು)

ಇ) ಈ ರೀತಿ ಪ್ರವೇಶ ದರಗಳನ್ನು ಹೆಚ್ಚಿಸಲು ಕಾರಣಗಳೇನು;

ಈ) ಈ ಶುಲ್ಕ ಹೆಚ್ಚಳವನ್ನು ರದ್ದುಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ?

ಶ್ರೀ ಸಿ.ಹೆಚ್. ವಿಜಯಶಂಕರ್ (ಅರಣ್ಯ ಸಚಿವರು)